**ಕರ್ನಾಟಕ ಸರ್ಕಾರ**

**ಕಂದಾಯ ಇಲಾಖೆ**

**ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ**

---

ವಿಷಯ:- ಕೋವಿಡ್ ಸೋಂಕು ಒಬ್ಬರಿಂದ ಒಬ್ಬರಿಗೆ ಹರಡಂತೆ ತಡೆಯುವ ಸಲುವಾಗಿ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ಚಿತ್ರದುರ್ಗ ಜಿಲ್ಲೆಯಾದ್ಯಂತ ಮುಂಜಾಗ್ರತಾ ಕ್ರಮವಾಗಿ ಸಿ.ಆರ್.ಪಿ.ಸಿ 1973 ರ ಕಲಂ 144 ರ ಮೇರೆಗೆ ಹೊರಡಿಸಿರುವ ನಿಷೇಧಾಜ್ಞೆ ಯನ್ನು ಪರಿಷ್ಕರಿಸಿ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು, ರವರ ಆದೇಶ ಸಂ:ಆರ್.ಡಿ 158 ಟಿ.ಎನ್.ಆರ್.2020 ದಿ:07-05-2021.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ: ಸಿಐ 06 ಎಸ್‌ಪಿಐ 2020 ದಿನಾಂಕ:08-05-2021.

$$$$$$$$

**ಪ್ರಸ್ತಾವನೆ:**

ಕೋವಿಡ್ ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ತೆಗೆದುಕೊಳ್ಳಲು ವಿಪತ್ತು ನಿರ್ವಹಣೆ ಅಧಿನಿಯಮ -2005 ರ ಪ್ರಕರಣ 24 ರಡಿಯಲ್ಲಿ ಪ್ರದತ್ತವಾದ ಅಧಿಕಾರಿಗಳನ್ನು ಚಲಾಯಿಸಿ ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರು ರಾಜ್ಯಾದ್ಯಂತ ಸಾರ್ವಜನಿಕರ ಹಿತದೃಷ್ಟಿಯಿಂದ ಕೋವಿಡ್ ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು ಉಲ್ಲೇಖ(1) ರಲ್ಲಿ ಪರಿಷ್ಕೃತ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಿದ್ದು, ಕಟ್ಟುನಿಟ್ಟಾಗಿ ಪಾಲಿಸಲು ಆದೇಶಿಸಲಾಗಿರುತ್ತದೆ. ಅದರಂತೆ ದಿನಾಂಕ:10-05-2021 ರ ಬೆಳಗ್ಗೆ 6-00 ಗಂಟೆಯಿಂದ ಜಾರಿಗೆ ಬರಲಿದ್ದು, ದಿನಾಂಕ:24-05-2021 ರ ಬೆಳಗ್ಗೆ 6-00 ಗಂಟೆಯವರೆಗೆ ಸಾರ್ವಜನಿಕರ ಗುಂಪುಗೂಡುವಿಕೆಯನ್ನು ತಡೆಗಟ್ಟಲು ಕರ್ಫ್ಯೂವನ್ನು ವಿಧಿಸಲು ನಿರ್ದೇಶಿಸಲಾಗಿರುತ್ತದೆ. ಉಲ್ಲೇಖದಂತೆ ಆದೇಶಿಸಲಾಗಿರುತ್ತದೆ.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಬೆಂಗಳೂರು ರವರ ಉಲ್ಲೇಖ(2) ರ ಸುತ್ತೋಲೆಯಲ್ಲಿನ ಅಂಶಗಳನ್ವಯ ಕೆಲವು ಕೈಗಾರಿಕಾ ಚಟುವಟಿಕೆಗಳಿಗೆ ವಿನಾಯಿಯನ್ನು ನೀಡಿ ಅವುಗಳನ್ನು ಅತ್ಯಗತ್ಯ ಸೇವೆಗಳೆಂದು ಪರಿಗಣಿಸಿ ಅವುಗಳ ಕಾರ್ಯಗಳನ್ನು ಮುಂದುವರೆಸಲು ವಿನಾಯಿತಿ ನೀಡಿರುತ್ತಾರೆ.

ಪ್ರಯುಕ್ತ ಉಲ್ಲೇಖ(1) ರ ಸರ್ಕಾರದ ಆದೇಶ ಹಾಗೂ ಉಲ್ಲೇಖ(2)ರ ಸುತ್ತೋಲೆಯನ್ವಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿರುವುದರಿಂದ ಈ ಕೆಳಕಂಡಂತೆ ಆದೇಶಿಸಿರುತ್ತೇನೆ.

**:ಆದೇಶ:**

**ಸಂಖ್ಯೆ:ಎಂ.ಎ.ಜಿ(3) ಸಿಆರ್- 06/2021-22** **ದಿನಾಂಕ:09-05-2021.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ **ಕವಿತಾ ಎಸ್. ಮನ್ನಿಕೇರಿ,** ಭಾ.ಆ.ಸೇ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ಚಿತ್ರದುರ್ಗ ಜಿಲ್ಲೆ ಆದ ನಾನು ಚಿತ್ರದುರ್ಗ ಜಿಲ್ಲೆಯಲ್ಲಿ ಸೋಂಕು ಪ್ರಸರಣದ ಸರಪಳಿಯನ್ನು ಮುರಿಯಲು ಸಾರ್ವಜನಿಕರ ಹಿತದೃಷ್ಟಿಯಿಂದ ಪರಿಣಾಮಕಾರಿಯಾಗಿ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಸಿ.ಆರ್.ಪಿ.ಸಿ 1973 ರ ಕಲಂ 144 ರ ಮೇರೆಗೆ ದಿನಾಂಕ:10-05-2021 ರ ಬೆಳಗ್ಗೆ 6-00 ಗಂಟೆಯಿಂದ ದಿನಾಂಕ:24-05-2021 ರ ಬೆಳಗ್ಗೆ 6-00 ಗಂಟೆಯವರೆಗೆ ನಿಷೇಧಾಜ್ಞೆ ವಿಧಿಸಿ ಆದೇಶಿಸಿರುತ್ತೇನೆ. ಸದರಿ ಅವಧಿಯಲ್ಲಿ ಉಲ್ಲೇಖ(1) ಮತ್ತು (2) ರಲ್ಲಿ ವಿನಾಯಿತಿ ನೀಡಿರುವ ಚಟುವಟಿಕೆಗಳನ್ನು ನಡೆಸಲು ಅನುಮತಿ ನೀಡಿ, ಉಳಿದ ಅತ್ಯವಶ್ಯ ಸೇವೆಗಳಿಗೆ ಬೆಳಗ್ಗೆ 6-00 ರಿಂದ 10 ಗಂಟೆಯವರೆಗೆ ಮಾತ್ರ ಸಡಿಲಿಕೆ ನೀಡಿರುತ್ತದೆ. ಉಳಿದಂತೆ ಸಂಪೂರ್ಣ ನಿಷೇಧಾಜ್ಞೆ ಜಾರಿಗೊಳಿಸಿ ಆದೇಶಿಸಿರುತ್ತೇನೆ.

ಸಂಬಂಧಪಟ್ಟ ಇಲಾಖಾ ಮುಖ್ಯಸ್ಥರು ಪೊಲೀಸ್ ಇಲಾಖೆಯವರು, ತಹಶೀಲ್ದಾರರು ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಗೂ ಇತರೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಮಾರ್ಗಸೂಚಿಗಳನ್ನು ಕರ್ಫ್ಯೂ ಅವಧಿಯಲ್ಲಿ ಸರ್ಕಾರದಿಂದ ಹೊರಡಿಸಿರುವ ನಿಬಂಧನೆಗಳನ್ನು ಉಲ್ಲಂಘನೆಯಾಗದಂತೆ ನಿಗಾವಹಿಸಲು ಆದೇಶಿಸಿರುತ್ತೇನೆ.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರಡಿ ಹಾಗೂ ಭಾರತೀಯ ದಂಡ ಸಂಹಿತೆಯ ಕಲಂ 188 ರ ಅಡಿಯಲ್ಲಿ ಶಿಸ್ತಿನ ಕಾನೂನು ಕ್ರಮ ಮತ್ತು ಅನ್ವಯವಾಗಬಹುದಾದ ಇತರೆ ಉಪಬಂಧಗಳ ಮೇರೆಗೆ ಕ್ರಮ ಜರುಗಿಸಲಾಗುವುದು.

**(ಕವಿತಾ ಎಸ್.ಮನ್ನಿಕೇರಿ)**
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :-**

1) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಕರ್ನಾಟಕ ಸರ್ಕಾರ ಆನಂದ ರಾವ್ ವೃತ್ತ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4) ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ರವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯತ್, ಚಿತ್ರದುರ್ಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಚಿತ್ರದುರ್ಗ ರವರ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
7) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ರವರ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8) ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿಕೋಶ, ಚಿತ್ರದುರ್ಗ ರವರಿಗೆ ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ
9) ಜಿಲ್ಲೆಯ ಎಲ್ಲಾ ತಾಲ್ಲೂಕು, ದಂಡಾಧಿಕಾರಿಗಳಿಗೆ.
10) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.